# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1619
ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 18.03.2026

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಸಾರಿಗೆ ಇಲಾಖೆಯು ಇದುವರೆಗೆ ಮುಜರಾಯಿ ಇಲಾಖೆಯ ಎಷ್ಟು ಎಕರೆ ಜಮೀನನ್ನು ತನ್ನ ವಶಕ್ಕೆ ಉಚಿತವಾಗಿ ಪಡೆದುಕೊಂಡಿದೆ; (ವಿವರ ನೀಡುವುದು) | ಸಾರಿಗೆ ಇಲಾಖೆಯ ವ್ಯಾಪ್ತಿಗೊಳಪಡುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ಮುಜರಾಯಿ ಇಲಾಖೆಯಿಂದ ಈ ಕೆಳಕಂಡ ನಿವೇಶನಗಳನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಪಡೆಯಲಾಗಿರುತ್ತದೆ.<br>1. ದಕ್ಷಿಣ ಕನ್ನಡ ಜಿಲ್ಲೆ, ಕಡಬ ತಾಲ್ಲೂಕು ಶ್ರೀ ಕುಕ್ಕೆ ಸುಬ್ರಹ್ಮಣ್ಯಸ್ವಾಮಿ ದೇವಾಲಯಕ್ಕೆ ಸೇರಿದ ಸರ್ವೆ ನಂಬರ್ 83/1 ಹಾಗೂ 61/4ರಲ್ಲಿನ ಒಟ್ಟು 2 ಎಕರೆ ಜಮೀನನ್ನು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಆದೇಶ ಸಂಖ್ಯೆ ಎಡಿಎಂ.7.ಪಿಟಿಎನ್.ಸಿಆರ್.5/96-97, ದಿನಾಂಕ:13-06-1996ರ ಅನ್ವಯ ದಿನಾಂಕ:12.11.1997ರಲ್ಲಿ ದಾನಪತ್ರದ ಮುಖೇನ ಸಾರ್ವಜನಿಕ ಉದ್ದೇಶಕ್ಕೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಬಸ್ ನಿಲ್ದಾಣ ನಿರ್ಮಾಣಕ್ಕಾಗಿ ಉಚಿತವಾಗಿ ನೀಡಲಾಗಿರುತ್ತದೆ. ಸದರಿ ನಿವೇಶನದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಬಸ್ ನಿಲ್ದಾಣ ನಿರ್ಮಿಸಿದ್ದು, ಸಾರ್ವಜನಿಕರ ಉಪಯೋಗದಲ್ಲಿದೆ.<br>2. ಶ್ರೀ ಮಲೆಮಹದೇಶ್ವರ ಬೆಟ್ಟ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ 02 ಎಕರೆ 12 ಗುಂಟೆ ಜಾಗವನ್ನು ನಿಗಮಕ್ಕೆ ಭೌತಿಕವಾಗಿ ಹಸ್ತಾಂತರಿಸಿದ್ದು, ನಿವೇಶನವನ್ನು ನಿಗಮದ ಹೆಸರಿಗೆ ವರ್ಗಾಯಿಸಿರುವುದಿಲ್ಲ. ಸದರಿ ಜಾಗದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಬಸ್ ನಿಲ್ದಾಣವನ್ನು ನಿರ್ಮಿಸಿದ್ದು, ಸಾರ್ವಜನಿಕರ ಉಪಯೋಗದಲ್ಲಿದೆ.<br>3. ಚಾಮರಾಜನಗರ ಜಿಲ್ಲೆ, ಯಳಂದೂರು ತಾಲ್ಲೂಕು, ಬಿಳಿಗಿರಿರಂಗನಬೆಟ್ಟ ಗ್ರಾಮದ ಸರ್ವೆ ನಂ. 4/56 ರಲ್ಲಿ ಶ್ರೀ ಬಿಳಿಗಿರಿ ರಂಗನಾಥಸ್ವಾಮಿ ದೇವಾಲಯಕ್ಕೆ ಸೇರಿದ 87.20 ಎಕರೆ ಜಮೀನಿನ ಪೈಕಿ 0.24 ಎಕರೆ ಜಮೀನನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಚಾಮರಾಜನಗರ ವಿಭಾಗ, ಚಾಮರಾಜನಗರ ಇವರಿಗೆ ಬಸ್‌ನಿಲ್ದಾಣ ನಿರ್ಮಿಸುವ ಸಲುವಾಗಿ ಸಾರ್ವಜನಿಕ |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | ಉದ್ದೇಶಕ್ಕೆ ಉಚಿತವಾಗಿ ನೀಡಿ ಸರ್ಕಾರದ ಆದೇಶ ಸಂಖ್ಯೆ:ಕಂ/28/ಮುಆಬಿ/2019, ದಿನಾಂಕ:08-07-2020 ರನ್ವಯ ಕಾರ್ಯ್ನಿರಿಸಲು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಅಧಿನಿಯಮ ಕಾಯ್ದೆ, 1997ರ ಕಲಂ 62ರನ್ವಯ ಮಂಜೂರಾತಿ ನೀಡಲಾಗಿರುತ್ತದೆ. |
| ಆ. | ದೇವನಹಳ್ಳಿಯಲ್ಲಿನ ಸರ್ವೆ ಸಂ 306ರ 5.25 ಎಕರೆ ಭೂಮಿಯು ಶ್ರೀ ರಂಗನಾಥಸ್ವಾಮಿ ದೇವಸ್ಥಾನ ಜಾಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು; | ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವ್ಯಾಪ್ತಿಯ ದೇವನಹಳ್ಳಿಯಲ್ಲಿನ ಸ.ನಂ.306 ರ 5.25 ಎ/ಗು ಭೂಮಿಯು ಶ್ರೀ ರಂಗನಾಥಸ್ವಾಮಿ ದೇವಸ್ಥಾನದ ಜಾಗವಾಗಿದ್ದು, ಶ್ರೀ ರಂಗನಾಥಸ್ವಾಮಿ ದೇವಸ್ಥಾನ ಮತ್ತು ಟಿ.ಬಿ.ತೋಪು ಹೆಸರಿನಲ್ಲಿರುವ 05 ಎಕರೆ 25 ಗುಂಟೆ ಜಮೀನಿನ ಪೈಕಿ ನೂತನ ವಿದ್ಯುತ್ ಚಾಲಿತ ವಾಹನಗಳ ಘಟಕ ನಿರ್ಮಾಣಕ್ಕಾಗಿ 05 ಎಕರೆ ಜಮೀನನ್ನು ಗುತ್ತಿಗೆ ಆಧಾರದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಹಂಚಿಕೆ ಮಾಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಇವರು ಆಯುಕ್ತರು, ಧಾರ್ಮಿಕ ದತ್ತಿ ಮತ್ತು ಮುಜರಾಯಿ ಇಲಾಖೆ, ಬೆಂಗಳೂರು ಇವರಿಗೆ ದಿನಾಂಕ:12.12.2025 ರಂದು ಪತ್ರ ಬರೆಯಲಾಗಿದ್ದು, ಪ್ರಸ್ತಾವನೆಯು ಕಂದಾಯ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಇ. | ದೇವಸ್ಥಾನದ ಜಮೀನು ಮತ್ತು ತೋಪು ಸಾರಿಗೆ ಇಲಾಖೆಗೆ ಹಸ್ತಾಂತರಿಸುವ ಕುರಿತು ಕ್ರಮಕೈಗೊಳ್ಳುತ್ತಿರುವುದರಿಂದ ಜನರ ಧಾರ್ಮಿಕ ನಂಬಿಕೆ ಮತ್ತು ಭಾವನೆಗಳ ಧಕ್ಕೆ ಉಂಟಾಗುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ; | ಚಾಮರಾಜನಗರ ಜಿಲ್ಲೆ, ಯಳಂದೂರು ತಾಲೂಕು, ಬಿಳಿಗಿರಿರಂಗನಬೆಟ್ಟ ಗ್ರಾಮದ ಸರ್ವೆ ನಂ. 4/56 ರಲ್ಲಿ ಶ್ರೀ ಬಿಳಿಗಿರಿ ರಂಗನಾಥಸ್ವಾಮಿ ದೇವಾಲಯಕ್ಕೆ ಸೇರಿದ 87.20 ಎಕರೆ ಜಮೀನಿನ ಪೈಕಿ 0.24 ಎಕರೆ ಜಮೀನನ್ನು ಹಾಗೂ ದಕ್ಷಿಣ ಕನ್ನಡ ಜಿಲ್ಲೆ, ಕಡಬ ತಾಲ್ಲೂಕು ಶ್ರೀ ಕುಕ್ಕೆ ಸುಬ್ರಹ್ಮಣ್ಯಸ್ವಾಮಿ ದೇವಾಲಯಕ್ಕೆ ಸೇರಿದ ಸರ್ವೆ ನಂಬರ್ 83/1 ಹಾಗೂ 61/4ರಲ್ಲಿನ ಒಟ್ಟು 2 ಎಕರೆ ಜಮೀನನ್ನು ಹಾಗೂ ಶ್ರೀ ಮಲೆಮಹದೇಶ್ವರ ಬೆಟ್ಟ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ 02 ಎಕರೆ 12 ಗುಂಟೆ ಜಾಗವನ್ನು ಭಕ್ತಾದಿಗಳ ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸಾರ್ವಜನಿಕ ಉದ್ದೇಶಕ್ಕೆ ಉಚಿತವಾಗಿ ಧಾರ್ಮಿಕ ದತ್ತಿ ಇಲಾಖೆಯ ವತಿಯಿಂದ ನೀಡಲಾಗಿರುವುದರಿಂದ ಜನರ ಧಾರ್ಮಿಕ ನಂಬಿಕೆ ಮತ್ತು ಭಾವನೆಗಳಿಗೆ ಧಕ್ಕೆ ಉಂಟಾಗುವ ಪ್ರಶ್ನೆ ಉದ್ಭವಿಸುವುದಿಲ್ಲ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಈ. | ದೇವಸ್ಥಾನ ಜಮೀನಿನ ರೀತಿಯಲ್ಲೇ ವಕ್ಫ್ ಬೋರ್ಡ್‌ನ ಭೂಮಿಯನ್ನು ಸಾರಿಗೆ ಇಲಾಖೆ ತನ್ನ ವಶಕ್ಕೆ ಪಡೆಯುವ ಚಿಂತನೆ ನಡೆಸಿದೆಯೇ; ಇದುವರೆಗೆ ಎಷ್ಟು ಎಕರೆ ವಕ್ಫ್ ಜಮೀನು ಸಾರಿಗೆ ಇಲಾಖೆ ಉಚಿತವಾಗಿ ತನ್ನ ವಶಕ್ಕೆ ಪಡೆದಿದೆ? (ವಿವರ ನೀಡುವುದು) | ಸಾರಿಗೆ ಇಲಾಖೆಯ ವ್ಯಾಪ್ತಿಗೊಳಪಡುವ ಸಾರ್ವಜನಿಕ ಉದ್ದಿಮೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಡಿ.ದೇವರಾಜ್ ಅರಸ್ ಟ್ರಕ್ ಟರ್ಮಿನಲ್ ಲಿಮಿಟೆಡ್‌ಗಳು ವಕ್ಫ್ ಬೋರ್ಡ್‌ನ ಯಾವುದೇ ಭೂಮಿಯನ್ನು ಸಾರಿಗೆ ಇಲಾಖೆಯ ವಶಕ್ಕೆ ಉಚಿತವಾಗಿ ಪಡೆಯುವ ಪ್ರಸ್ತಾವನೆ ಇರುವುದಿಲ್ಲ. |

**ಸಂಖ್ಯೆ: ಟಿಡಿ 135 ಟಿಸಿಕ್ಯೂ 2026**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು